(1)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಿ.ಎಲ್.ಡಿ.ಇ. ಅಸೋಸಿಯೇಷನ್ಸ್ ಕಾಲೇಜ್ ಆಫ್ ಫಾರ್ಮಸಿ, ಬಿಜಾಪುರ ಇಲ್ಲಿ 2011-12 ನೇ ಸಾಲಿನಿಂದ ಎಂ.ಫಾರ್ಮ ಮತ್ತು ಫಾರ್ಮ-ಡಿ ಕೋರ್ಸ್‌ಗಳನ್ನು ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ರಿಜಿಸ್ಟ್ರಾರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಎಸಿಎ/ಪಿಹೆಚ್-26/2011-12, ದಿನಾಂಕ:16-09-2010.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ರಿಜಿಸ್ಟ್ರಾರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4 ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು ಇವರು ಬಿ.ಎಲ್.ಡಿ.ಇ. ಅಸೋಸಿಯೇಷನ್ಸ್ ಕಾಲೇಜ್ ಆಫ್ ಫಾರ್ಮಸಿ, ಬಿಜಾಪುರ ಇಲ್ಲಿ ಎಂ.ಫಾರ್ಮ (ಫಾರ್ಮಾಸ್ಯೂಟಿಕಲ್ ಟೆಕ್ನಾಲಜಿ) ಮತ್ತು ಫಾರ್ಮ-ಡಿ (ಪೋಸ್ಟ್ ಬ್ಯಾಕ್ಯುಲರೇಟ್) ಕೋರ್ಸ್‌ಗಳನ್ನು ತಲಾ 10 ಸೀಟುಗಳ ಪ್ರವೇಶ ಮಿತಿಯೊಂದಿಗೆ 2011-12 ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸುವ ಕುರಿತು ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ತೆಗೆದುಕೊಂಡ ನಿರ್ಣಯದ ಪ್ರತಿಗಳನ್ನು ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರ ಪರಿಶೀಲಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 327 ಪಿಟಿಡಿ 2010,**
**ಬೆಂಗಳೂರು, ದಿನಾಂಕ:29-09-2011**

1994 ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 45(5) ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಬಿ.ಎಲ್.ಡಿ.ಇ. ಅಸೋಸಿಯೇಷನ್ಸ್ ಕಾಲೇಜ್ ಆಫ್ ಫಾರ್ಮಸಿ, ಬಿಜಾಪುರ ಇಲ್ಲಿ 2011-12 ನೇ ಶೈಕ್ಷಣಿಕ ಸಾಲಿನಿಂದ ಎಂ.ಫಾರ್ಮ (ಫಾರ್ಮಾಸ್ಯೂಟಿಕಲ್ ಟೆಕ್ನಾಲಜಿ) ಮತ್ತು ಫಾರ್ಮ-ಡಿ (ಪೋಸ್ಟ್ ಬ್ಯಾಕ್ಯುಲರೇಟ್) ಕೋರ್ಸ್‌ಗಳನ್ನು ತಲಾ 10 ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಶಿಫಾರಸ್ಸು ಮಾಡಲಾಗಿದೆ.

1) ಸಂಯೋಜನೆಯ ಬಗ್ಗೆ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನ ಅನುಮತಿ ಪಡೆಯತಕ್ಕದ್ದು.
2) ಸಂಯೋಜನೆಯ ಬಗ್ಗೆ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮತಿ ಪಡೆಯತಕ್ಕದ್ದು.
3) ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4) ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ / ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು ನಿಗಧಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5) ರಾಜ್ಯ ಸರ್ಕಾರವು ಕಾಲ-ಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.

B.L.D.E. Association's
College of Pharmacy
Bijapur
Inward No. 73
Date 3-10-11

ೞ



6) ಈ ಕಾಲೇಜುಗಳಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7) ಪ್ರಸ್ತಾಪಿತ ಎಂ.ಫಾರ್ಮ ಸೀಟುಗಳಲ್ಲಿ ಶೇಕಡಾ 50 ರಷ್ಟು ಸೀಟುಗಳನ್ನು ಸರ್ಕಾರಿ ಸೀಟುಗಳಾಗಿ ಬಿಟ್ಟು ಕೊಡತಕ್ಕದ್ದು.
8) ಸರ್ಕಾರದ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ / ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಆರ್.ಎಸ್. ಇಟಗಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

**ಇವರಿಗೆ:**

1) ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4 ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು-41.
2) ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಆನಂದರಾವ್ ವೃತ್ತ, ಬೆಂಗಳೂರು-560 009.
3) ಪ್ರಾಂಶುಪಾಲರು, ಬಿ.ಎಲ್.ಡಿ.ಇ. ಅಸೋಸಿಯೇಷನ್ಸ್ ಕಾಲೇಜ್ ಆಫ್ ಫಾರ್ಮಸಿ, ಸೋಲಾಪುರ್ ರೋಡ್, ಬಿಜಾಪುರ-586 103.
4) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು-1.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ವೈದ್ಯಕೀಯ ಶಿಕ್ಷಣ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
6) ಸರ್ಕಾರದ ಉಪ ಕಾರ್ಯದರ್ಶಿಗಳು (ವೈದ್ಯಕೀಯ ಶಿಕ್ಷಣ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.